(ಗೊಂದಲ)

ಶ್ರೀ ಪಿಳ್ಳ ಮುನಿಶಾಮಪ್ಪ:– ದೇವನಹಳ್ಳಿ ತಾಲ್ಲೂಕಿನ ಸಬ್ ಇನ್ಸ್‌ಪೆಕ್ಟರ್ ಬಗ್ಗೆ ಮಾತನಾಡುವುದು ಇದೆ. ದಯವಿಟ್ಟು ಹತ್ತು ನಿಮಿಷ ಅವಕಾಶ ಕೊಡಿ.

ಅಧ್ಯಕ್ಷರು:– ಬೇರೆ ಕಾರ್ಯಕ್ರಮ ಯಾವುದೂ ಬೇಡವೇ? ಖಚಿತವಾದಂಥ ಉತ್ತರವನ್ನು ಹೇಳಿದ್ದಾರಲ್ಲ. ಅದನ್ನು ಮುಂದೆ ನೋಡೋಣ. ಏಕೆ, ಓಡಿಹೋಗುತ್ತದೆಯೇ?

ಶ್ರೀ ಸಿ.ಟಿ. ರವಿ:– ಲಂಗೂಲಗಾಮು ಏನೂ ಇಲ್ಲದ ಹಾಗೆ ಆಗಿದೆ.

ಶ್ರೀ ಸಿದ್ದರಾಮಯ್ಯ:– ಇನ್ನು ಮುಂದೆ ಈ ರೀತಿ ಆಗಬಾರದು ಎಂದು ಎಲ್ಲ ಡಿ.ಸಿ.ಗಳಿಗೂ ಸುತ್ತೋಲೆಯನ್ನು ಕಳುಹಿಸಿ, ಇನ್ನು ಮೇಲೆ ಯಾರಾದರೂ ಮಾಡಿದರೆ ಕಠಿಣವಾಗಿ ಕ್ರಮ ತೆಗೆದುಕೊಳ್ಳುತ್ತೇವೆ ಎಂದು ತಿಳಿಸುತ್ತೇನೆ.

ಅಧ್ಯಕ್ಷರು:– ಆಯಿತು, ಈ ವಿಷಯ ಸಾಕು. ಈಗ ವಿಧೇಯಕಗಳನ್ನು ಮಂಡಿಸುವುದು.

6. ಶಾಸನ ರಚನೆ

ವಿಧೇಯಕಗಳನ್ನು ಮಂಡಿಸುವುದು

1) ಕರ್ನಾಟಕ ಭೂ ಸುಧಾರಣೆ ಮತ್ತು ಇತರೆ ಕೆಲವು ಕಾನೂನು (ತಿದ್ದುಪಡಿ) ವಿಧೇಯಕ, 2014 ಮಂಡನೆಗೆ ಅನುಮತಿ ಕೋರಿಕೆ

ಶ್ರೀ ವಿ. ಶ್ರೀನಿವಾಸ ಪ್ರಸಾದ್ (ಕಂದಾಯ ಸಚಿವರು):– ಮಾನ್ಯ ಅಧ್ಯಕ್ಷರೆ, 2014ನೇ ಸಾಲಿನ ಕರ್ನಾಟಕ ಭೂ ಸುಧಾರಣೆ ಮತ್ತು ಇತರ ಕೆಲವು ಕಾನೂನು (ತಿದ್ದುಪಡಿ) ವಿಧೇಯಕವನ್ನು ಮಂಡಿಸಲು ಅನುಮತಿ ಕೋರುತ್ತೇನೆ.

ಅಧ್ಯಕ್ಷರು:– ಪ್ರಸ್ತಾವನೆಯನ್ನು ಮಂಡಿಸಲಾಯಿತು. ಈಗ ಪ್ರಸ್ತಾವನೆಯನ್ನು ಸಭೆಯ ಮತಕ್ಕೆ ಹಾಕುತ್ತೇನೆ. ಪ್ರಸ್ತಾವನೆ ಹೀಗಿದೆ:

2014ನೇ ಸಾಲಿನ ಕರ್ನಾಟಕ ಭೂ ಸುಧಾರಣೆ ಮತ್ತು ಇತರ ಕೆಲವು ಕಾನೂನು (ತಿದ್ದುಪಡಿ) ವಿಧೇಯಕವನ್ನು ಮಂಡಿಸಲು ಅನುಮತಿ ನೀಡಬೇಕು.

ಪ್ರಸ್ತಾವದ ಪರವಾಗಿರುವವರು 'ಹೌದು' ಎಂದು ಸೂಚಿಸಬೇಕು

ಪ್ರಸ್ತಾವದ ವಿರೋಧವಾಗಿರುವವರು 'ಇಲ್ಲ' ಎಂದು ಸೂಚಿಸಬೇಕು

ಪ್ರಸ್ತಾವವು 'ಹೌದು' ಎನ್ನುವವರ ಪರವಾಗಿದೆ

ಪ್ರಸ್ತಾವವು 'ಹೌದು' ಎನ್ನುವವರ ಪರವಾಗಿದೆ

ಪ್ರಸ್ತಾವವು ಅಂಗೀಕೃತವಾಗಿದೆ.

ಮಾನ್ಯ ಸಚಿವರು ಈಗ ದಯವಿಟ್ಟು ವಿಧೇಯಕವನ್ನು ಮಂಡಿಸಬೇಕು.

ಶ್ರೀ ವಿ. ಶ್ರೀನಿವಾಸ ಪ್ರಸಾದ್ (ಕಂದಾಯ ಸಚಿವರು):– ಮಾನ್ಯ ಅಧ್ಯಕ್ಷರೆ, 2014ನೇ ಸಾಲಿನ ಕರ್ನಾಟಕ ಭೂ ಸುಧಾರಣೆ ಮತ್ತು ಇತರ ಕೆಲವು ಕಾನೂನು (ತಿದ್ದುಪಡಿ) ವಿಧೇಯಕವನ್ನು ಮಂಡಿಸುತ್ತೇನೆ.

ಅಧ್ಯಕ್ಷರು:– ವಿಧೇಯಕವನ್ನು ಮಂಡಿಸಲಾಗಿದೆ. (ಅನುಬಂಧ–4)

2) ಕರ್ನಾಟಕ ನ್ಯಾಯಾಲಯ ಶುಲ್ಕಗಳ ಮತ್ತು ದಾವೆಗಳ ಮೌಲ್ಯ ನಿರ್ಣಯ (ತಿದ್ದುಪಡಿ) ವಿಧೇಯಕ, 2014

ಮಂಡನೆಗೆ ಅನುಮತಿ ಕೋರಿಕೆ

ಶ್ರೀ ಟಿ.ಬಿ. ಜಯಚಂದ್ರ (ಕಾನೂನು, ನ್ಯಾಯ ಮತ್ತು ಮಾನವ ಹಕ್ಕುಗಳು ಹಾಗೂ ಸಂಸದೀಯ ವ್ಯವಹಾರಗಳು, ಶಾಸನ ರಚನೆ, ಪಶುಸಂಗೋಪನೆ ಮತ್ತು ಮುಜರಾಯಿ ಸಚಿವರು):– ಮಾನ್ಯ ಅಧ್ಯಕ್ಷರೆ, 2014ನೇ ಸಾಲಿನ ಕರ್ನಾಟಕ ನ್ಯಾಯಾಲಯ ಶುಲ್ಕಗಳ ಮತ್ತು ದಾವೆಗಳ ಮೌಲ್ಯ ನಿರ್ಣಯ (ತಿದ್ದುಪಡಿ) ವಿಧೇಯಕವನ್ನು ಮಂಡಿಸಲು ಅನುಮತಿ ಕೋರುತ್ತೇನೆ.